# ಕರ್ನಾಟಕ ಸರ್ಕಾರ

ಸಂಖ್ಯೆ: ಆರ್‌ಡಿ 306 ಟಿಆರ್‌ಎಂ 2017

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 29.12.2017

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬೆಂಗಳೂರು.

ಇವರಿಗೆ:
ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು,

ಮಾನ್ಯರೇ,

ವಿಷಯ: ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಸ್ಥಿರಾಸ್ತಿಯನ್ನು ಖಾತೆ ಮಾಡಿ, ಆರ್.ಟಿ.ಸಿ. ಯಲ್ಲಿ ನಮೂದಿಸುವ ಕುರಿತು.

ಉಲ್ಲೇಖ: ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿರವರ ಟಿಪ್ಪಣಿ ಸಂಖ್ಯೆ: ಸಿಎಸ್/16075/2017, ದಿ: 14.12.2017.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಟಿಪ್ಪಣಿ ಹಾಗೂ ಅದರೊಂದಿಗಿನ ಅಡಕದ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ. ರಾಜ್ಯದಲ್ಲಿನ ಖಾತೆಯಾಗದಿರುವ ಎಲ್ಲಾ ಸರ್ಕಾರಿ ಪ್ರಾಥಮಿಕ ಶಾಲೆಗಳು, ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಸೇರಿದ ಸ್ಥಿರಾಸ್ತಿಯನ್ನು ಆಯಾ ಶಾಲೆಗಳ ಹೆಸರಿಗೆ ಖಾತಾ ಬದಲಾವಣೆ ಮಾಡಿ ಆರ್.ಟಿ.ಸಿ. ಯಲ್ಲಿ ನಮೂದಿಸಿ, ಪಹಣಿಯನ್ನು ನೀಡಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಕರ್ನಾಟಕ ರಾಜ್ಯ ಶಿಕ್ಷಣಾಧಿಕಾರಿಗಳ ಸಂಘದವರು ಕೋರಿರುತ್ತಾರೆ. ಸದರಿ ಮನವಿಯು ಸ್ವಯಂವೇದ್ಯವಿದ್ದು, ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಿ, ಸರ್ಕಾರಿ ಶಾಲೆ/ಕಾಲೇಜುಗಳ ಹೆಸರಿಗೆ ಸ್ಥಿರಾಸ್ತಿಯ ಖಾತೆಯನ್ನು ಕಾನೂನಿನ್ವಯ ಬದಲಾವಣೆ ಮಾಡಲು ಜರೂರಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಎಸ್.ಪುಷ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂ ಕಂದಾಯ).

ಹಿರಿಯ ಸಹಾಯಕ ನಿರ್ದೇಶಕರು
([redacted] ಪ್ರಾಥಮಿಕ)
ಆಯುಕ್ತರ ಕಛೇರಿ, ಸಾ.ಶಿ. ಇಲಾಖೆ
ಬೆಂಗಳೂರು

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿ ಕಟ್ಟಡ, ಬೆಂಗಳೂರು– ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿರವರು, ವಿಧಾನಸೌಧ, ಬೆಂಗಳೂರು– ಮಾಹಿತಿಗಾಗಿ.